ವಿಷಯ: ಶ್ರೀ ವಿ.ಬಿ.ಮೌನೇಶ್, ಅಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಯರಗಟ್ಟಿ ಗ್ರಾಮ ಪಂಚಾಯತಿ, ಸವದತ್ತಿ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರ ವಿರುದ್ಧ ಮಾನ್ಯ ಉಪಲೋಕಾಯುಕ್ತ ವರದಿಯ ಶಿಫಾರಸ್ಸಿನನ್ವಯ ಕ್ರಮವಹಿಸುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 160 ಗ್ರಾಪಂಕಾ 2015, ದಿನಾಂಕ: 15.05.2015
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ. UPLOK/DE-274/2015/ARE-1, ದಿನಾಂಕ: 06.02.2017
3. ಸರ್ಕಾರದ ಸಮಸಂಖ್ಯೆಯ ಎರಡನೇ ಕಾರಣ ಕೇಳಿ ನೋಟೀಸ್, ದಿನಾಂಕ 20.02.2017
4. ಶ್ರೀ ವಿ.ಬಿ.ಮೌನೇಶ್, ಅಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಯರಗಟ್ಟಿ ಗ್ರಾಮ ಪಂಚಾಯತಿ, ಸವದತ್ತಿ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರು ಎರಡನೇ ಕಾರಣ ಕೇಳಿ ನೋಟೀಸ್‌ಗೆ ಸಲ್ಲಿಸಿರುವ ಉತ್ತರ, ದಿನಾಂಕ 07.03.2017

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿ ಶ್ರೀ ವಿ.ಬಿ.ಮೌನೇಶ್, ಅಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಯರಗಟ್ಟಿ ಗ್ರಾಮ ಪಂಚಾಯತಿ, ಸವದತ್ತಿ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ)ನಿಯಮಾವಳಿಗಳು 1957 ರ ನಿಯಮ 14(ಎ) ರಡಿಯಲ್ಲಿ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರಿಗೆ ವಹಿಸಲಾಗಿತ್ತು. ಅದರಂತೆ ಅಪರ ನಿಬಂಧಕರು ವಿಚಾರಣೆಗಳು-1, ಕರ್ನಾಟಕ ಲೋಕಾಯುಕ್ತ ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

> "ಶ್ರೀ ವಿ.ಬಿ.ಮೌನೇಶ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಯರಗಟ್ಟಿ ಗ್ರಾಮ ಪಂಚಾಯತಿ, ಸವದತ್ತಿ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರು ದಿನಾಂಕ 19.19.2012 ರಂದು ಯರಗಟ್ಟಿ ಗ್ರಾಮದ ಆಸ್ತಿ ಸಂಖ್ಯೆ: 1434 ಮತ್ತು 1456 ಯ ಆಸ್ತಿಗೆ ಕಾಂಪೌಂಡ್ ನಿರ್ಮಿಸಲು ಲೈಸೆನ್ಸ್ ಕೋರಿ ಶ್ರೀ ರಾಜೇಶ್ ಬಿನ್ ಬಸಪ್ಪ ಬಳಿಗಾರ್, ಗಲಬಿಯವರ್ ಓಣಿ, ಯರಗಟ್ಟಿ ಗ್ರಾಮ ಇವರು ಅರ್ಜಿ ಸಲ್ಲಿಸಿದ್ದು, ಪಂಚಾಯತಿ ಅಭಿವೃದ್ಧಿ ಅಧೀಕಾರಿಯು ಯಾವುದೇ ಕ್ರಮ ವಹಿಸಿರುವುದಿಲ್ಲ. ದಿನಾಂಕ 06.07.2013 ರಂದು ಸವದತ್ತಿ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಯವರು ಈ ಬಗ್ಗೆ ಕ್ರಮವಹಿಸಲು ನಿರ್ದೇಶನ ನೀಡಿದ್ದರೂ ಸಹ ಕ್ರಮವಹಿಸದೆ ಕರ್ತವ್ಯಲೋಪ ಎಸಗಿದ್ದು, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 3(1) (ii) ಮತ್ತು (iii)ರ ಅನ್ವಯ ಶಿಸ್ತು ಕ್ರಮಕ್ಕೆ ಬಾಧ್ಯರಾಗಿದ್ದಾರೆಂದು ಮಾನ್ಯ ಉಪಲೋಕಾಯುಕ್ತ ವರದಿಯಲ್ಲಿ ತಿಳಿಸಲಾಗಿದೆ."

ವಿಚಾರಣಾಧಿಕಾರಿಯವರು, ಮಾನ್ಯ ಉಪಲೋಕಾಯುಕ್ತರಿಗೆ ವಿಚಾರಣಾ ವರದಿಯನ್ನು ಸಲ್ಲಿಸಿದ್ದು ಸದರಿ ವರದಿಯ ಅನುಸಾರ ಶ್ರೀ ವಿ.ಬಿ.ಮೌನೇಶ್, ಅಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಯರಗಟ್ಟಿ ಗ್ರಾಮ ಪಂಚಾಯತಿ, ಸವದತ್ತಿ ತಾಲ್ಲೂಕು, ಬೆಳಗಾವಿ ಜಿಲ್ಲೆ ರವರ ವಿರುದ್ಧದ ಆರೋಪವು ಸಾಬೀತಾಗಿರುವುದೆಂದು ತಿಳಿಸಿರುತ್ತಾರೆ.

ಮೇಲೆ ಓದಲಾದ (2) ರಲ್ಲಿ ವಿಚಾರಣಾಧಿಕಾರಿಯವರ ವರದಿಯ ಆಧಾರದ ಮೇಲೆ, ಸದರಿ ನೌಕರರ ವಿರುದ್ಧದ ಆರೋಪಗಳು ಸಾಬೀತಾಗಿರುವ ಹಿನ್ನೆಲೆಯಲ್ಲಿ, ಶ್ರೀ ವಿ.ಬಿ.ಮೌನೇಶ್, ಅಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಯರಗಟ್ಟಿ ಗ್ರಾಮ ಪಂಚಾಯತಿ, ಸವದತ್ತಿ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರಿಗೆ ಎರಡು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮವಾಗಿ ತಡೆಹಿಡಿಯುವ ದಂಡನೆಯನ್ನು ವಿಧಿಸಲು ಮಾನ್ಯ ಉಪಲೋಕಾಯುಕ್ತರು ದಿನಾಂಕ 03.02.2017 ರ ವರದಿಯಲ್ಲಿ ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ (3) ರಲ್ಲಿ ನಿಯಮಾನುಸಾರ ಆರೋಪಿತ ನೌಕರರಿಗೆ ವಿಚಾರಣಾ ವರದಿ ಮತ್ತು ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನ ಪ್ರತಿಯೊಂದಿಗೆ ಎರಡನೇ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಲಾಗಿತ್ತು ಈ ನೋಟಿಸಿಗೆ ಸದರಿ ನೌಕರರು ಮೇಲೆ ಓದಲಾದ (4) ರಲ್ಲಿ ಲಿಖಿತ ಹೇಳಿಕೆ ಸಲ್ಲಿಸಿರುತ್ತಾರೆ.

ವಿಚಾರಣಾಧಿಕಾರಿಯವರ ವರದಿಯನ್ನು ಪರಿಶೀಲಿಸಲಾಗಿ, ವಿಚಾರಣಾಧಿಕಾರಿಯವರು ಆಪಾದಿತ ನೌಕರರು ನೀಡಿರುವ ಲಿಖಿತ ಹೇಳಿಕೆ, ದಾಖಲೆಗಳನ್ನು ಪರಿಶೀಲಿಸಲಾಗಿ ಸದರಿ ಪ್ರಕರಣದಲ್ಲಿ ಭಾಗಿಯಾದ ಶ್ರೀ ವಿ.ಬಿ.ಮೌನೇಶ್, ಅಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಯರಗಟ್ಟಿ ಗ್ರಾಮ ಪಂಚಾಯತಿ, ಸವದತ್ತಿ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966 ರ ನಿಯಮ 3(1) ರನ್ವಯ ದುರ್ನಡತೆ ಎಸಗಿರುವುದು ಸಾಬೀತಾಗಿರುವುದಾಗಿ ತಿಳಿಸಿದ್ದು, ಈ ವರದಿಯ ಆಧಾರದ ಮೇಲೆ ಮಾನ್ಯ ಉಪಲೋಕಾಯುಕ್ತರು ದಂಡನೆ ವಿಧಿಸಲು ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಪರಿಶೀಲಿಸಿ, ಆಪಾದಿತರು ಎರಡನೇ ಕಾರಣ ಕೇಳುವ ನೋಟೀಸಿನಲ್ಲಿ ಎತ್ತಿರುವ ಆಕ್ಷೇಪಣೆಗಳಿಗೆ ಸಂಬಂಧ ಪಟ್ಟಂತೆ ವಿಚಾರಣಾಧಿಕಾರಿಯವರು ತಮ್ಮ ವರದಿಯಲ್ಲಿ ವಿವರವಾದ ಕಾರಣಗಳನ್ನು ನೀಡಿರುತ್ತಾರೆ. ಸದರಿ ಕಾರಣಗಳು ಸಮರ್ಥನೀಯವಾಗಿದೆ. ಆದುದರಿಂದ ಆಪಾದಿತರ ಆಕ್ಷೇಪಣೆಗಳು ಸಮಂಜಸವಾಗಿ ಇರುವುದಿಲ್ಲವಾದ್ದರಿಂದ, ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನಂತೆ ಶ್ರೀ ವಿ.ಬಿ.ಮೌನೇಶ್, ಅಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಯರಗಟ್ಟಿ ಗ್ರಾಮ ಪಂಚಾಯತಿ, ಸವದತ್ತಿ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರಿಗೆ ಎರಡು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮವಾಗಿ ತಡೆಹಿಡಿಯುವ ದಂಡನೆಯನ್ನು ವಿಧಿಸಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಆದೇಶ.-

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 105 ಗ್ರಾಪಂಕಾ 2017, ಬೆಂಗಳೂರು, ದಿನಾಂಕ: 22.09.2017</u>**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನನ್ವಯ ಶ್ರೀ ವಿ.ಬಿ.ಮೌನೇಶ್, ಅಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಯರಗಟ್ಟಿ ಗ್ರಾಮ ಪಂಚಾಯತಿ, ಸವದತ್ತಿ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳು, 1957 ರನ್ವಯ ಸದರಿ ನೌಕರರ ಎರಡು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮವಾಗಿ ತಡೆಹಿಡಿಯುವ ದಂಡನೆಯನ್ನು ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ.ಅರುಣ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಬೆಳಗಾವಿ ಜಿಲ್ಲಾ ಪಂಚಾಯತಿ, ಬೆಳಗಾವಿ.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಗದಗ ಜಿಲ್ಲಾ ಪಂಚಾಯತಿ, ಗದಗ.
6. ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು ಬಿ ಮತ್ತು ಸಿ), ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ.
7. ಕಾರ್ಯನಿರ್ವಾಹಕ ಅಧಿಕಾರಿ, ಸವದತ್ತಿ ತಾಲ್ಲೂಕು ಪಂಚಾಯತಿ, ಸವದತ್ತಿ, ಬೆಳಗಾವಿ ಜಿಲ್ಲೆ.
   (ಸಂಬಂಧಿಸಿದ ನೌಕರರಿಗೆ ಆದೇಶದ ಪ್ರತಿಯನ್ನು ತಲುಪಿಸಿ, ಸರ್ಕಾರಕ್ಕೆ ಸ್ವೀಕೃತಿ ಸಲ್ಲಿಸುವಂತೆ ಕೋರಿದೆ.)
8. ಶ್ರೀ ವಿ.ಬಿ.ಮೌನೇಶ್, ಅಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಯರಗಟ್ಟಿ ಗ್ರಾಮ ಪಂಚಾಯತಿ, ಸವದತ್ತಿ ತಾಲ್ಲೂಕು, ಬೆಳಗಾವಿ ಜಿಲ್ಲೆ
9. ಗಣಕಕೋಶ, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ. – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.